| | |
|---|---|
| | **Publication:** Hosadigantha |
| | **Edition**: Karnataka |
| | **Date**: 3rd November, 2014 |
| | **Page: 2** |

**Headline : Protest By Patients To Release Funds**

# ರೋಗಿಗಳ ಚಿಕಿತ್ಸೆಗೆ ಹಣ ಬಿಡುಗಡೆಗೆ ಆಗ್ರಹ



ಬಜೆಟ್‌ನಲ್ಲಿ ಮಂಜೂರಾದ ಹಣದ ಬಿಡುಗಡೆಗೆ ಒತ್ತಾಯಿಸಿ ರೋಗಿಗಳು ಮತ್ತು ಕುಟುಂಬ ಸದಸ್ಯರು ನಗರದ ಸ್ವಾತಂತ್ರ್ಯ ಉದ್ಯಾನವನದಲ್ಲಿ ಪ್ರತಿಭಟನೆ ನಡೆಸಿದರು.

**ಬೆಂಗಳೂರು:** ಅಪರೂಪದ ಕಾಯಿಲೆಗೊಳಗಾದ ರೋಗಿಗಳ ಚಿಕಿತ್ಸೆಗಾಗಿ ರಾಜ್ಯ ಬಜೆಟ್‌ನಲ್ಲಿ ಮಂಜೂರಾದ ಹಣದ ಬಿಡುಗಡೆಗೆ ಒತ್ತಾಯಿಸಿ ರೋಗಿಗಳು ಮತ್ತು ಕುಟುಂಬ ಸದಸ್ಯರು ನಗರದ ಸ್ವಾತಂತ್ರ್ಯ ಉದ್ಯಾನವನದಲ್ಲಿ ಪ್ರತಿಭಟನೆ ನಡೆಸಿದರು.

ಅಪರೂಪದ ಕಾಯಿಲೆಯ ರೋಗಿಗಳಿಗೆ ಅಗತ್ಯವಿರುವ ಚಿಕಿತ್ಸೆಯು ಆಜೀವವಾಗಿರುತ್ತದೆ. ಈ ಹಿನ್ನೆಲೆಯಲ್ಲಿ ರೋಗಿಗಳ ಕುಟುಂಬಗಳಿಗೆ ಸಹಾಯ ಮಾಡುವ ಉದ್ದೇಶದಿಂದ ರಾಜ್ಯ ಸರ್ಕಾರ ಬಜೆಟ್‌ನಲ್ಲಿ ಘೋಷಿಸಿರುವ ಹಣವನ್ನು ತುರ್ತಾಗಿ ಬಿಡುಗಡೆ ಮಾಡುವಂತೆ ಪ್ರತಿಭಟನಾಕಾರರು ಒತ್ತಾಯಿಸಿದರು.

ಇಂದಿರಾಗಾಂಧಿ ಇನ್‌ಸ್ಟಿಟ್ಯೂಟ್ ಆಫ್ ಚೈಲ್ಡ್ ಹೆಲ್ತ್‌ನಲ್ಲಿ ವಿಶೇಷ ಘಟಕವನ್ನು ಸ್ಥಾಪಿಸಲು ಸರ್ಕಾರ 2014-15 ರಲ್ಲಿನ ಬಜೆಟ್‌ನಲ್ಲಿನ ಮೀಸಲಾತಿಯ ಜೊತೆಗೆ ಕರ್ನಾಟಕದಲ್ಲಿ ಅಪರೂಪದ ಕಾಯಿಲೆಗಳನ್ನು ಹೊಂದಿರುವ ಮಕ್ಕಳ ಚಿಕಿತ್ಸೆಯನ್ನೂ ಸೇರಿಸಿ ಮಹತ್ವದ ನಿರ್ಣಯವನ್ನು ತೆಗೆದುಕೊಂಡಿದ್ದು, ಕೂಡಲೇ ವಿಶೇಷ ಘಟಕವನ್ನು ಸ್ಥಾಪಿಸಿ ಚಿಕಿತ್ಸೆ ನೀಡಲು ಮುಂದಾಗಬೇಕು ಎಂದು ಒತ್ತಾಯಿಸಿದರು.